[redacted]



# ಕ್ರಿಕೆಟ್ ಪಂದ್ಯಾವಳಿಯಲ್ಲಿ ಶಿಕ್ಷಣ ಇಲಾಖೆ ಜಯ



ಗದಗ ಏಪ್ರಿಲ್ 23: ಲೋಕಸಭಾ ಸಾರ್ವತ್ರಿಕ ಚುನಾವಣೆ –2024 ರ ಅಂಗವಾಗಿ ಗದಗ ಜಿಲ್ಲಾ ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಮಾಧ್ಯಮ ತಂಡ ಒಳಗೊಂಡ 15 ಸೀಮಿತ ಓವರ್ ಗಳ ಟೆನ್ನಸಿ ಬಾಲ್ ಮತ್ತು ಕ್ರಿಕೆಟ್ ಪಂದ್ಯಾವಳಿ ಹಮ್ಮಿಕೊಂಡಿದೆ. ಆ ದೆಸೆಯಲ್ಲಿ ಮಂಗಳವಾರ ಮುಂಡರಗಿ ತಾಲೂಕು ಕ್ರೀಡಾಂಗಣದಲ್ಲಿ ನಡೆದ ಕಂದಾಯ ಇಲಾಖೆ ತಂಡದ ವಿರುದ್ಧ ಶಿಕ್ಷಣ ಇಲಾಖೆಯು ಎರಡನೇ ಕ್ರಿಕೆಟ್ ಪಂದ್ಯಾವಳಿಯಲ್ಲಿ ಗೆಲುವನ್ನು ಸಾಧಿಸಿದೆ ಎಂದು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಎಸ್‌ಕೆ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಂದ ವಿವಿಧೆಡೆ ಮತದಾನ ಜಾಗೃತಿ




ಬಳ್ಳಾರಿ,ಏ.24:ಮತದಾರರು ಮತದಾನ ಮಾಡುವ ಮೂಲಕ ತಮ್ಮ ಜವಾಬ್ದಾರಿಯನ್ನು ಪ್ರದರ್ಶಿಸಬೇಕು ಎಂದು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಗಳಾದ ಪ್ರೊ.ತಿಪ್ಪೇರುದ್ರಪ್ಪ.ಜೆ ಅವರು ಹೇಳಿದರು.

ವಾಣಿಜ್ಯಶಾಸ್ತ್ರ ಅಧ್ಯಯನ ಹಾಗೂ ಪ್ರದರ್ಶನ ಕಲೆ ವಿಭಾಗದ ಸಹಯೋಗದೊಂದಿಗೆ ಮಂಗಳವಾರ ವಿಶ್ವವಿದ್ಯಾಲಯದ ಆವರಣದಲ್ಲಿ ‘ಮತದಾನ ಜಾಗೃತಿ’ ಜಾಥಾಗೆ ಚಾಲನೆ ನೀಡಿ ಮಾತನಾಡಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಎಸ್.ಎನ್.ರುದ್ರೇಶ್ ಅವರು ಮಾತನಾಡಿ, ಮತದಾನದ ಪ್ರಮಾಣ ಹೆಚ್ಚಿಸಲು ಮತದಾನ ಜಾಗೃತಿ ಅಭಿಯಾನಗಳು ಅವಶ್ಯಕ ಎಂದರು.

ವಾಣಿಜ್ಯಶಾಸ್ತ್ರ ವಿಭಾಗ ಮುಖ್ಯಸ್ಥರಾದ ಪ್ರೊ.ಸದ್ಯೋಜಾತಪ್ಪ.ಎಸ್ ಅವರು ಮಾತನಾಡಿ, ಮತದಾರರು ಯಾವುದೇ ಆಮಿಷಕ್ಕೆ ಒಳಗಾಗದೇ ಮತದಾನ ಮಾಡುವಂತೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.ವಿವಿಯ ವಿದ್ಯಾರ್ಥಿಗಳು ಮತದಾನದ ಪ್ರಾಮುಖ್ಯತೆ ಕುರಿತು ಜನರಲ್ಲಿ ಮತದಾನದ ಅರಿವು ಮೂಡಿಸಲು ಜಾಥಾವನ್ನು ನಗರದ ಹಲವಾರು ಪ್ರದೇಶಗಳಲ್ಲಿ ಹಮ್ಮಿಕೊಳ್ಳಲಾಗಿತ್ತು. ಚುನಾವಣೆಯ ಕುರಿತು ಗೌತಮ ನಗರದಲ್ಲಿ ಬೀದಿ ನಾಟಕ ಪ್ರದರ್ಶನ ಮಾಡಲಾಯಿತು. 100 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಜಾಥಾದಲ್ಲಿ ಭಾಗವಹಿಸಿ ಮತದಾನ ಮಾಡುವ ಕುರಿತು ಸಾರ್ವಜನಕರಿಗೆ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ವಾಣಿಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ.ಜೀಲಾನ್ ಬಾಷಾ, ಪ್ರೊ.ಭೀಮನಗೌಡ, ಡಾ.ಸಿದ್ದಪ್ಪ, ಡಾ.ರಾಘವೇಂದ್ರ, ಡಾ.ಜ್ಯೋತಿಲಿಂಗ, ನಾಟಕ ವಿಭಾಗದ ಅತಿಥಿ ಉಪನ್ಯಾಸಕರುಗಳಾದ ಡಾ.ಅಣ್ಣಾಜಿ ಕೃಷ್ಣಾರೆಡ್ಡಿ, ಸಹನಾ ಪಿಂಜಾರ, ಹೇಮೇಶ್ವರ.ಕೆ ಹಾಗೂ ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಇದ್ದರು.

# ಹಿಂದೂ ಯುವತಿಯ ಜೊತೆ ಮುಸ್ಲಿಂ ಯುವಕರು ಅಸಭ್ಯ ವರ್ತನೆ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಶ್ರೀರಾಮ ಸೇನಾದಿಂದ ಮನವಿ



ಗದಗ: ನನ್ನೆ ರಾತ್ರಿ ವಿ ಆರ್ ಎಲ್ ಟ್ರಾವೆಲ್ಸ್ ಬಸ್ಸಿನಲ್ಲಿ ಹಿಂದೂ ಯುವತಿಯ ಜೊತೆ ಮುಸ್ಲಿಂ ಯುವಕರು ಅಸಭ್ಯವಾಗಿ ವರ್ತಿಸಿರುವ ಯುವಕರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿಗಳಿಗೆ ಸಂಘದ ರಾಜ್ಯ ಕಾರ್ಯದರ್ಶಿಯಾದ ರಾಜು ಖಾನಪ್ಪನವರ ಹಾಗೂ ಸಂಘದ ಪದಾಧಿಕಾರಿಗಳಿಂದ ಮನವಿ ಸಲ್ಲಿಸಿದರು.

ಮನವಿ ಪತ್ರದಲ್ಲಿ ಕಳೆದ ಎಂಟು ತಿಂಗಳಿಂದ ಹಿಂದೂ ಯುವತಿಯರ ಮೇಲೆ ದೌರ್ಜನ್ಯ ಲವ್ ಜಿಹಾದ್ ಪ್ರಕರಣಗಳು ಹೆಚ್ಚುತ್ತಿವೆ ಎಂದು ತಮ್ಮ ಗಮನಕ್ಕೆ ತರಬಯಸುತ್ತಿದ್ದೇವೆ.

ಹಿಂದೂ ಯುವತಿಯು ಬೆಳಗಾವಿಯಿಂದ ಹೈದರಾಬಾದಿಗೆ ಪ್ರಯಾಣ ಮಾಡುವ ವೇಳೆ ಹುಬ್ಬಳ್ಳಿಯಲ್ಲಿ ಹತ್ತಿದ 16 ಜನ ಮುಸ್ಲಿಂ ಯುವಕರು ಹಿಂದೂ ಯುವತಿಗೆ ಕಾಯ್ದಿರಿಸಿದ ಸೀಟಿನಲ್ಲಿ ಕುಳಿತು ಅಸಭ್ಯ ವರ್ತನೆಯನ್ನು ತೋರಿದಲ್ಲದೆ ಬುದ್ದಿ ಹೇಳಲು ಬಂದ ಬಸ್ ಸಂಚಾರ ಮಾಡುವ ಡ್ರೈವರ್ ಮೇಲೆಯೂ ಹಲ್ಲೆ ಮಾಡಿದ್ದಾರೆ ಡ್ರೈವರ್ ಶಹರ ಪೊಲೀಸ್ ಠಾಣೆಗೆ ಬಸ್ ತೆಗೆದುಕೊಂಡು ಹೋಗಿ ಪ್ರಕರಣ ದಾಖಲಿಸಿದಾನೆ.

ನಗರದ ನರಸಾಪುರ ಗ್ರಾಮದಲ್ಲಿ ಸಹ ಹಿಂದೂ ಯುವತಿಯ ಜೊತೆ ಮುಸ್ಲಿಂ ಯುವಕರು ಗೂಂಡಾ ವರ್ತನೆಯಾದ ಒಂದು ಘಟನೆಯಾಗಿದ್ದು ಬೆಟಗೇರಿಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಜಿಲ್ಲೆಯಲ್ಲಿ ಹಿಂದು ಯುವತಿಯರ ಮೇಲೆ ನಡೆಯಿತ್ತಿರುವ ಹಲ್ಲೆ ಹಾಗೂ ಲವ್ ಜಿಹಾದ್ ಪ್ರಕರಣಗಳನ್ನು ಗಮನಿಸಿ ಪ್ರಕರಣಗಳನ್ನು ತಡೆಯಲು ತಾವು ಮಧ್ಯ ಪ್ರವೇಶಿಸಬೇಕೆಂದು ಮನವಿ ಸಲ್ಲಿಸಿದರು ಮನವಿ ಸಲ್ಲಿಸುವಾಗರಾಜು ಖಾನಪ್ಪನವರ ಮಹೇಶ ರೋಖಡೆ, ಸೋಮು ಗುಡಿ, ಅಶೋಕ ಭಜಂತ್ರಿ ,ಹುಲಿಗೆಪ್ಪ ವಾಲ್ಮೀಕಿ ಸಂಜೀವ ಸೂರ್ಯವಂಶಿ

ಕಿರಣ ಹಿರೇಮಠ,ಸತೀಶ ಕುಂಬಾರ,ಪರಶುರಾಮ ಆಡೀನ,ಸಂತೋಷ ಹೂಗಾರ,ಕುಮಾರ ನಡಿಗೇರಿ ಈರಣ್ಣ ಗಾಣಿಗೇರ ಸಂಜು ಚೆಟ್ಟಿಸುನೀಲ ಮುಳ್ಳಾಳ,ಬಸವರಾಜ ಬನ್ನಿಮರದ,ವೆಂಕಟೇಶ ದೊಡ್ಡಮನಿ,ಮಂಜು ನಾಲ್ವಾಡ,ಮೌನೇಶ ದಾಸರ,ಮಹಾಬಲೇಶ್ವರ ಶೆಟ್ಟರ ಮಂಜು ಗುಡಿ ಶರಣಪ್ಪ ಲಕ್ಕುಂಡಿ ಬಸವರಾಜ ದನಾವಾರು ಅವೋಘ ಉಪಸ್ಥಿತರಿದ್ದರು

# ಪತ್ರಕರ್ತರ ಸಂಘಕ್ಕೆ ನೂತನ ಅಧ್ಯಕ್ಷರಾಗಿ ಬಸವರಾಜ್ ಮರದೂರು ಕಾರ್ಯದರ್ಶಿಯಾಗಿ ರಾಘವೇಂದ್ರ ಅರಕೇರಿ ಆಯ್ಕೆ



ಕೊಪ್ಪಳ : ಸುವರ್ಣ ಕರ್ನಾಟಕ ಪತ್ರಕರ್ತರ ಸಂಘದ ಪದಾಧಿಕಾರಿಗಳನ್ನು ಕೊಪ್ಪಳ ನಗರದ ಕೇಂದ್ರೀಯ ಬಸ್ ನಿಲ್ದಾಣ ವರ್ಣೇಕರ್ ಕಾಂಪ್ಲೆಕ್ಸ್ ಹತ್ತಿರ ಪತಕರ್ತರ ಸಂಘದ ಸರ್ವ ಸದಸ್ಯರ ಒಪ್ಪಂದದ ಮೇರೆಗೆ ಅವಿರೋಧವಾಗಿ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಬಸವರಾಜ್ ಮರದೂರ ಕಾರ್ಯದರ್ಶಿ ಸ್ಥಾನಕ್ಕೆ ರಾಘವೇಂದ್ರ ಅರಕೇರಿ ಅವರನ್ನು ಆಯ್ಕೆ ಮಾಡಲಾಯಿತು

ಈ ಸಂದರ್ಭದಲ್ಲಿ ಅಧ್ಯಕ್ಷ ಬಸವರಾಜ ಮರದೂರ ಅವರು ಮಾತನಾಡಿ ಪತ್ರಕರ್ತರ ಏಳಿಗೆಗೆ ಸಧಾ ಸಿದ್ದನದ್ದೇನೆ, ಬರುವ ದಿನಗಳಲ್ಲಿ ಕೊಪ್ಪಳ ಜಿಲ್ಲೆಯ ಎಲ್ಲಾ ತಾಲೂಕು ಘಟಕಗಳಲ್ಲಿ ತಾಲೂಕು ಪದಾಧಿಕಾರಿಗಳ ನೇಮಕ ಮಾಡಿ ಸಂಘಟನೆ ಬಲಿಷ್ಠ ಗೊಳಿಸಲಾಗುವದು ಹಾಗೂ ಪತ್ರಕರ್ತ ಸಂಘದಿಂದ ಪತ್ರಕರ್ತರ ಕುಂದು ಕೊರತೆಗೆ ಸ್ಪಂದಿಸುವುದಾಗಿ ಅಧ್ಯಕ್ಷನಾಗಿ ಬಸವರಾಜ್ ಮರದೂರ ಭರವಸೆ ನೀಡಿದರು

ತದನಂತರ ಕಾರ್ಯದರ್ಶಿ ರಾಘವೇಂದ್ರ ಅರಕೇರಿ ಅವರು ಮಾತನಾಡುತ್ತಾ ಪತ್ರಕರ್ತರಿಗೆ ಅನ್ಯಾಯ ವಾದಾಗ ನಾವು ಪತ್ರಕರ್ತರ ಸಂಘದಿಂದ ನ್ಯಾಯಕ್ಕೆ ಕೊಡಿಸುವ ಕೆಲಸ ನಮ್ಮ ಸಂಘದಿಂದ ಮಾಡಬೇಕು ಎಲ್ಲಾ ತಾಲೂಕು ಕೇಂದ್ರದಲ್ಲಿ ನಮ್ಮ ಸಂಘ ಮುನ್ನಡೆಯಬೇಕು ಸಂಘದ ನಿರ್ಣಾಯಕ ಎಲ್ಲಾ ಸದಸ್ಯರು ಬದ್ಧರಾಗಿರಬೇಕು ಈಗಾಗಲೇ ಕೊಪ್ಪಳದಲ್ಲಿ ಈಗಾಗಲೇ ಎರಡು ಪತ್ರಕರ್ತರ ಸಂಘಗಳು ಇದ್ದಾವೆ ಕೊಪ್ಪಳ ಜಿಲ್ಲೆಯಲ್ಲಿ ಮೂರನೇ ಸಂಘವಾಗಿ ಸುವರ್ಣ ಕರ್ನಾಟಕ ಪತ್ರಕರ್ತರ ಸಂಘ ಜಿಲ್ಲಾ ಸಮಿತಿಯನ್ನು ಪುನರ್ ರಚಸಿ ಸುವರ್ಣ ಕರ್ನಾಟಕ ರಾಜ್ಯ ಅಧ್ಯಕ್ಷರು ಕಾರ್ಯದರ್ಶಿಗಳು ಉಪಾಧ್ಯಕ್ಷರು ಅನುಮತಿ ಮೇರೆಗೆ ಇತರ ವಿಷಯಗಳನ್ನು ಚರ್ಚೆ ಮಾಡಿ ಜಿಲ್ಲಾಧ್ಯಕ್ಷರಾಗಿ ಬಸವರಾಜ ಮಾರದೂರ ಕಾರ್ಯದರ್ಶಿಯಾಗಿ ರಾಘವೇಂದ್ರ ಅರಕೇರಿಯನ್ನು ಆಯ್ಕೆ ಮಾಡಲಾಯಿತು

ಈ ವೇಳೆ ಸಂಘದ ರಾಜ್ಯ ಅಧ್ಯಕ್ಷರಾದ ವೈ. ಬಿ. ಜೂಡಿ, ರಾಜ್ಯ ಕಾರ್ಯದರ್ಶಿಗಳಾದ ರಮೇಶ್ ಪವಾರ್ ರಾಜ್ಯ ಉಪಾಧ್ಯಕ್ಷರಾದ ಲಲಿತಾ ಪೂಜಾರ್ ಜಿಲ್ಲಾ ಸಮಿತಿ ನೂತನ ಜಿಲ್ಲಾಧ್ಯಕ್ಷರಾದ ಬಸವರಾಜ್ ಮಾರದುರ ಕಾರ್ಯದರ್ಶಿಗಳಾದ ರಾಘವೇಂದ್ರ ಅರಕೇರಿ ಪದಾಧಿಕಾರಿಗಳಾದ ಆನಂದ ಜಾಲಿಹಾಳ, ಮಹೇಶ್ ಹಳ್ಳಿಕೇರಿ ಪ್ರಭು ಚೆನ್ನದಾಸರ, ಎಂ. ಎನ್. ಕುಂದಗೋಳ, ದಸ್ತಗಿರಿ ಸಾಬ್, ಉದಯ್ ತೋಟದ, ಇನ್ನಿತರ ಸದಸ್ಯರು ಉಪಸ್ಥಿತರಿದ್ದರು.

# ಏಪ್ರಿಲ್ 26 ರ ಚುನಾವಣೆ ಪ್ರಯುಕ್ತ ಹೆಚ್ಚುವರಿ ವಿಶೇಷ ಸಾರಿಗೆಗೆಳ ಕಾರ್ಯಾಚರಣೆ

ಗದಗಏ24: ಏಪ್ರಿಲ್ 26 ರಂದು ಲೋಕಸಭಾ ಚುನಾವಣೆಗೆ ಮತದಾನ ನಡೆಯಲಿರುವ ಪ್ರಯುಕ್ತ ಮತದಾನಕ್ಕಾಗಿ ಸಾರ್ವಜನಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ ವಾಕರ ಸಾ ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ ಧಾರವಾಡ ಗದಗ ಬೆಳಗಾವಿ ಉತ್ತರ ಕನ್ನಡ ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 80 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ ಬೆಂಗಳೂರಿನಂದ ರಾಜ್ಯ/ಅಂತರರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಏಪ್ರಿಲ್25 ಮತ್ತು ಏಪ್ರಿಲ್ 26 ರಂದು ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ ಸದರಿ ವಿಶೇಷ ಸಾರಿಗೆಗಳ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

# ಕಾರೆಕಲ್ಲು ಗ್ರಾಮದಲ್ಲಿ ಮತದಾನ ಜಾಗೃತಿಗೆ ರಂಗೋಲಿ ಸ್ಪರ್ಧೆ




ಬಳ್ಳಾರಿ,ಏ.:ಲೋಕಸಭಾ ಚುನಾವಣೆಗೆ ಮೇ 07 ರಂದು ನಡೆಯುವ ಮತದಾನ ದಿನದಂದು ಪ್ರತಿಯೊಬ್ಬ ಅರ್ಹರು ಮತದಾನ ಮಾಡಬೇಕು. ನಮ್ಮವರಿಗೂ ಮತದಾನ ಮಾಡುವಂತೆ ತಿಳಿಸಬೇಕು ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಮತ್ತು ಬಳ್ಳಾರಿ ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಮತದಾನ ಮಹತ್ವ ಸಾರಲು ಬಳ್ಳಾರಿ ತಾಲ್ಲೂಕಿನ ಕಾರೇಕಲ್ಲು ಗ್ರಾಮದಲ್ಲಿ ಮಂಗಳವಾರ ಏರ್ಪಡಿಸಿದ್ದ ರಂಗೋಲಿ ಸ್ಪರ್ಧೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅರ್ಹ ಮತದಾರರು ಯಾವುದೇ ಉಡುಗೊರೆಗಳಿಗೆ ಮರುಳಾಗದೇ ನಿರ್ಭೀತಿಯಿಂದ ಮತದಾನ ಮಾಡುವ ಮೂಲಕ ಸುಭದ್ರ ರಾಷ್ಟ್ರ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದರು.

ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಯುವತಿಯರಿಂದ ಆಕರ್ಷಕ ರಂಗೋಲಿ ಮೂಡಿದ್ದವು.

*ರಂಗೋಲಿ ಸ್ಪರ್ಧೆ ವಿಜೇತರ ಪಟ್ಟಿ: ಪ್ರಥಮ ಸ್ಥಾನ– ಸುಷ್ಮಾ, ದ್ವಿತೀಯ ಸ್ಥಾನ– ಶಾಂತಿ ಮತ್ತು ತೃತೀಯ ಸ್ಥಾನ– ಯಶೋಧ.

ಈ ಸಂಧರ್ಭದಲ್ಲಿ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕಾಧಿಕಾರಿ ಮಡಗಿನ ಬಸಪ್ಪ, ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕ ಮಹಮ್ಮದ್ ಗೌಸ್ ಸೇರಿದಂತೆ ಗ್ರಾಮ ಪಂಚಾಯತಿಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ಸಾರ್ವಜನಕರು ಉಪಸ್ಥಿತರಿದ್ದರು.

# ಆಮಿಷಗಳಿಗೆ ಒಳಗಾಗದೆ ಸ್ವಾಭಿಮಾನದಿಂದ ಮತ ಚಲಾಯಿಸಿ




ಬಳ್ಳಾರಿ,ಏ.: ಮೇ 07 ನಡೆಯುವ ಲೋಕಸಭಾ ಚುನಾವಣೆಗೆ ಮತದಾರರು ಆಮಿಷಗಳಿಗೆ ಒಳಗಾಗದೆ ಸ್ವಾಭಿಮಾನದಿಂದ ಮತ ಚಲಾಯಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ, ಕೌಲ್‌ಬಜಾರ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಇವರ ಆಶ್ರಯದಲ್ಲಿ ರೇಡಿಯೋ ಪಾರ್ಕ್‌ನ ಐಟಿಐ ಕಾಲೇಜು ಬಳಿಯಿಂದ ಹಮ್ಮಿಕೊಂಡಿದ್ದ ಮತದಾನ ಜಾಗೃತಿಯಲ್ಲಿ ಮಾತನಾಡಿದರು.

ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರ ಮತ ಅತ್ಯಮೂಲ್ಯವಾದದ್ದು, ಎಲ್ಲರು ಮತ ಚಲಾಯಿಸಿದರೆ ದೇಶದ ಅಭಿವೃದ್ಧಿಗೆ ಸಹಾಯವಾಗುತ್ತದೆ. ಜಾತಿ, ಮತ ಭೇದ ಅನ್ನದೆ ಎಲ್ಲರೂ ಮತ ಚಲಾಯಿಸಬೇಕು ಎಂದು ತಿಳಿಸಿದರು.

ಜಾಗೃತಿ ಜಾಥಾವು ರೇಡಿಯೋ ಪಾರ್ಕ್‌ನ ಐಟಿಐ ಕಾಲೇಜು ಬಳಿಯಿಂದ ಆರಂಭವಾಗಿ ಸೈಂಟ್ ಜೋಸೆಫ್ ಶಾಲೆ ಪ್ರದೇಶ, ಮಟನ್ ಮಾರ್ಕೆಟ್, ಅಬ್ದುಲ್ ಸಲೀಂ ಸ್ಟ್ರೀಟ್ (ಕೌಲಬಜಾರ್ ಏರಿಯಾ), ಸೇಂಟ್ ಫಿಲೋಮಿನಾ ಶಾಲೆ ಕಂಟೋನ್ಮೆಂಟ್ ವ್ಯಾಪ್ತಿಯ ಪ್ರದೇಶಗಳಲ್ಲಿ ಸಂಚರಿಸಿತು. ಈ ವೇಳೆ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ, ಡಾ.ಆರ್.ಅಬ್ದುಲಾ, ಆಡಳಿತ ವೈದ್ಯಾಧಿಕಾರಿ ಡಾ.ನರಸಿಂಹಮೂರ್ತಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶಾಂತಮ್ಮ ಉಪ್ಪಾರ, ಆರೋಗ್ಯ ನಿರೀಕ್ಷಣಾಧಿಕಾರಿ ಅರುಣ್‌ಕುಮಾರ್, ಚಂದ್ರನಾಯ್ಕ್, ಅನುಶ್ರೀ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಸುನೀತಾ, ಗಂಗಾ ಭವಾನಿ, ಹೊನ್ನೂರಬಿ, ಈಶ್ವರಮ್ಮ, ರುಕ್ಮಿಣಿ ಸೇರಿದಂತೆ ಆಶಾ ಕಾರ್ಯಕರ್ತೆಯರು, ಪೂಜಾ ನರ್ಸಿಂಗ್ ಕಾಲೇಜು ವಿಧ್ಯಾರ್ಥಿಗಳು ಹಾಗೂ ಇತರ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ನರೇಗಾ ಕೆಲಸದ ನಂತರ ಕಾರ್ಮಿಕರಿಗೆ ಕಬಡ್ಡಿ, ಖೋಖೋ ಆಟ



ಗದಗ: ಜಿಲ್ಲೆಯ ಮುಂಡರಗಿ ತಾಲೂಕು ಪಂಚಾಯತಿ ವಿಭಿನ್ನ ಮತ್ತು ವಿಶಿಷ್ಟ ನಡೆ ಅನುಸರಿಸಿ ನರೇಗಾ ಯೋಜನೆಗೆ ಸಾಂಸ್ಕೃತಿಕ, ಜನಪದ ಮೆರುಗು ನೀಡುತ್ತಿದೆ. ನರೇಗಾ ಯೋಜನೆಯಡಿ ಹೆಚ್ಚು ಮಾನವ ದಿನಗಳನ್ನು ಸೃಜಿಸಿ ಗ್ರಾಮೀಣ ಕೃಷಿ ಕೂಲಿ ಕಾರ್ಮಿಕರನ್ನು ಕೆಲಸದಲ್ಲಿ ತೊಡಗಿಸಲು ಮುಂಡರಗಿ ತಾಲೂಕು ಪಂಚಾಯತಿ ಮುಂದಾಗಿದೆ. ಜತೆಗೆ ಕೃಷಿ ಕಾರ್ಮಿಕರನ್ನು ಸೆಳೆಯಲು ಕೆಲಸ ಮುಗಿಸಿದ ನಂತರ ದೇಸಿ ಆಟಗಳನ್ನು ಆಡಿಸಲಾಗುತ್ತಿದೆ. ಮಹಿಳಾ ಕಾರ್ಮಿಕರಿಂದ ಸೋಬಾನ ಪದ (ಜನಪದ ಹಾಡು) ಹಾಡಿಸಿ ಮನರಂಜನೆಯನ್ನೂ ನೀಡಲಾಗುತ್ತಿದೆ. ಜೊತೆಗೆ ಕಬ್ಬಡ್ಡಿ, ಖೋ ಖೋ ಎಂಬ ಎಲೆ ಮರೆ ಕಾಯಿಯಂತಹ ಕ್ರೀಡೆಗಳಿಗೆ ನರೇಗಾ ಕಾಮಗಾರಿ ಮೂಲಕ ಜನಪ್ರಿಯ ಮಾಡಲು ಸಜ್ಜಾಗಿದೆ. ಅದರಲ್ಲೂ ದೇಸಿ ಕ್ರೀಡೆಗಳನ್ನು ಆಯ್ದುಕೊಂಡು ಕೂಲಿಕಾರ ಮಹಿಳೆಯರನ್ನು ಇಲ್ಲಿ ಸಕ್ರಿಯ ಮಾಡಿರುವುದು ತುಂಬ ವಿಶೇಷ. ದುಡಿಯುವ ಕೂಲಿಕಾರರಿಗೆ ಮನರಂಜನೆಯು ಮುಖ್ಯ. ಮಳೆಗಾಲ ಮರೀಚಿಕೆಯಾದ ಈ ದಿನಗಳ ನಡುವೆ ನರೇಗಾ ಯೋಜನೆ ಗ್ರಾಮೀಣ ಜನರಿಗೆ ದಾರಿದೀಪ. ಇದನ್ನು ಮನಗಂಡ ಮುಂಡರಗಿ ತಾಲೂಕು ಪಂಚಾಯತಿ ಸುಸ್ಥಿರ ನರೇಗಾ ಅಂಕಿ ಸಂಖ್ಯೆ ಅಭಿವೃದ್ಧಿಯತ್ತ ಸಾಂಸ್ಕೃತಿಕ, ಜನಪದ ಚಟುವಟಿಕೆಗಳ ಮೂಲಕ ಗಮನಹರಿಸಿ ಜನರಿಗೆ ಮಾಹಿತಿ ತಲುಪಿಸುತ್ತಿರುವುದು ಮಾದರಿ ಸಂಗತಿ. ಪುರುಷರಿಗಿಂತ ಗ್ರಾಮೀಣ ಪ್ರದೇಶದ ಮಹಿಳೆಯರೇ ಈ ಆಟದಲ್ಲಿ ಹೆಚ್ಚು ತೊಡಗಿರುವುದು ಗಮನಸತಕ್ಕ ಅಂಶ. ಹಾಗಾಗಿ ಮುಂಡರಗಿ ತಾಲೂಕು ಪಂಚಾಯತ ಕಳೆದ ವರ್ಷ ನರೇಗಾ ಕಾಮಗಾರಿಗಳಲ್ಲಿ ಮಹಿಳಾ ಭಾಗವಹಿಸುವಿಕೆ ಪ್ರಮಾಣದಲ್ಲಿ ಶೇಕಡಾ 50% ರಷ್ಟು ಯಶಸ್ಸು ಸಾಧಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

# ಪರಿಸರ ರಕ್ಷಣೆಗೆ ಸಾಮೂಹಿಕ ಕಾಳಜಿ ಅಗತ್ಯ: ಪ್ರೊ.ತಿಪ್ಪೇರುದ್ರಪ್ಪ

ಬಳ್ಳಾರಿ,ಏ.24:ಪರಿಸರ ಸಂರಕ್ಷಣೆಗೆ ಮಾನವನ ಕೊಡುಗೆಗಳು ಗಣನೀಯವಾಗಿ ಕ್ಷೀಣಿಸುತ್ತಿದ್ದು, ಇದು ಮನುಕುಲಕ್ಕೆ ಸಂಕಷ್ಟ ತಂದೊಡ್ಡುತ್ತದೆ ಎಂದು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಗಳಾದ ಪ್ರೊ.ತಿಪ್ಪೇರುದ್ರಪ್ಪ.ಜೆ ಅವರು ಅಭಿಪ್ರಾಯ ಪಟ್ಟರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಮಂಗಳವಾರ ವಿಶ್ವಸಂಸ್ಥೆಯ ಪರಿಸರ ಕಾರ್ಯಕ್ರಮ ಯೋಜನೆಯ ಭಾಗವಾಗಿ ಆಯೋಜಿಸಿದ್ದ ‘ಯುವಮಂಥನ’ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ಪರಿಸರ ರಕ್ಷಣೆಯ ಕುರಿತು ಸಾಮೂಹಿಕವಾಗಿ ಕಾಳಜಿ ವಹಿಸಬೇಕು. ಸ್ವಚ್ಛ ಪರಿಸರ ನಿರ್ಮಾಣಕ್ಕೆ ಪ್ರತಿಯೊಬ್ಬರು ತಮ್ಮ ಅಳಿಲು ಸೇವೆ ಸಲ್ಲಿಸುವುದು ಅಗತ್ಯ, ಈ ನಿಟ್ಟಿನಲ್ಲಿ ಸ್ವಯಂಪ್ರೇರಿತರಾಗಿ ಪರಿಸರ ರಕ್ಷಣೆಗೆ ಮುಂದಾಗಬೇಕು ಎಂದು ಕರೆ ನೀಡಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಎಸ್.ಎನ್ ರುದ್ರೇಶ್ ಅವರು ಮಾತನಾಡಿ, ಪರಿಸರದಲ್ಲಿನ ಹಲವಾರು ಜೀವರಾಶಿಗಳ ಉಳಿವಿಗಾಗಿ ನೈಸರ್ಗಿಕ ಸಂಪನ್ಮೂಲಗಳನ್ನು ಸಾಧ್ಯವಾದಷ್ಟು ಕಡಿಮೆ ಬಳಸಬೇಕು. ಸುಸ್ಥಿರ ಬದುಕಿಗೆ ಪ್ಲಾಸ್ಟಿಕ್ ಮುಕ್ತ ವಾತಾವರಣ ನಿರ್ಮಾಣವಾಗಬೇಕು ಎಂದು ಹೇಳಿದರು.

ನೈಸರ್ಗಿಕ ತಾಪಮಾನ ನಿಯಂತ್ರಣ ಮಾಡಲು ಮರ–ಗಿಡಗಳನ್ನು ನೆಟ್ಟು ಪೋಷಿಸಬೇಕು. ಇಲ್ಲವಾದಲ್ಲಿ ಮುಂಬರುವ ಪೀಳಿಗೆಗೆ ಪರಿಸರ ಕಾಳಜಿಗೆ ನಾವು ನೀಡುವ ಕೊಡುಗೆ ಶೂನ್ಯವಾಗುತ್ತದೆ ಎಂದು ತಿಳಿಸಿದರು.

ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥರಾದ ಡಾ.ವಿಜಯಕುಮಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದ ಸಂಯೋಜಕರಾದ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ನಿರಂಜನ್ ಅತಿಥಿಗಳನ್ನು ಸ್ವಾಗತಿಸಿದರು.

ಜಾಗತಿಕ ತಾಪಮಾನ ಏರಿಕೆ, ಹವಾಮಾನ ಬದಲಾವಣೆ, ಸುಸ್ಥಿರ ಅಭಿವೃದ್ಧಿ ಗುರಿಗಳು ಸೇರಿದಂತೆ ಪರಿಸರ ರಕ್ಷಣೆಯ ಕುರಿತಾದ 10 ವಿವಿಧ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಿಂದ ಸಂವಾದ ಕಾರ್ಯಕ್ರಮ ನಡೆಯಿತು.

ವಿವಿಧ ವಿಭಾಗಗಳ 50 ವಿದ್ಯಾರ್ಥಿಗಳು ತಮ್ಮ ವಿಚಾರಧಾರೆ ಮಂಡಿಸಿದರು. ಸಂವಾದ ಗೋಷ್ಠಿಗೆ ವಿಶ್ವವಿದ್ಯಾಲಯದ ಪ್ರಾಧ್ಯಾಪಕರುಗಳಾದ ಡಾ.ಹನುಮೇಶ್ ವೈದ್ಯ, ಡಾ.ಕೆ.ಎಸ್ ಲೋಕೇಶ್, ಡಾ.ಅಂಶುಮಾಲಿ ಅವರು ತೀರ್ಪುಗಾರರಾಗಿ ಆಗಮಿಸಿದ್ದರು.

ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮತದಾನ ಪ್ರಯುಕ್ತ ಹೆಚ್ಚುವರಿ ಸಾರಿಗೆ ಕಾರ್ಯಾಚರಣೆ

ಬೆಳಗಾವಿ.ಏ.24: ಲೋಕಸಭಾ ಚುನಾವಣೆ ಮತದಾನ ನಡೆಯಲಿರುವ ಪ್ರಯುಕ್ತ ಮತದಾನಕ್ಕಾಗಿ ಸಾರ್ವಜನಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ ಏ.26 ರಂದು ವಾ.ಕ.ರ.ಸಾ.ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 80 ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಬೆಂಗಳೂರಿನಂದ ರಾಜ್ಯ/ಅಂತರರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಏ.25 ಮತ್ತು 26 ರಂದು ಹೆಚ್ಚುವರಿ ವಿಶೇಳ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ.

ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಳ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಸಾರ್ವಜನಕ ಸಂಪರ್ಕಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಳ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಸಾರ್ವಜನಕ ಸಂಪರ್ಕಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.